



ಅರುಣ ಪಿ. ಭಟ್ಟ

## ವಾರಭವಿಷ್ಯ: 25.01.2024ರಿಂದ 31.01.2024ರವರೆಗೆ




ನಿಮ್ಮ ವಿಶ್ವಾಸ ಬೆಳೆಯುತ್ತದೆ ಮತ್ತು ಪ್ರಗತಿ ನಿಶ್ಚಿತವಾಗಿದೆ. ವೆಚ್ಚ ಏರಿದರೂ ಆದಾಯದಲ್ಲಿನ ಹೆಚ್ಚಳ ಖರ್ಚುಗಳನ್ನು ಸರಿದೂಗಿಸುತ್ತದೆ. ನಿಮ್ಮ ಅಭಿಪ್ರಾಯವನ್ನು ಇತರರ ಮೇಲೆ ಹೇರಬೇಡಿ. ನಿಮ್ಮ ಮನೆಯಲ್ಲಿ ಸಾಮರಸ್ಯ ತರುವ ಕೆಲಸ ಮಾಡಬೇಕು. ನಿಮ್ಮ ಸ್ಪರ್ಧಾತ್ಮಕ ಸ್ವಭಾವ ನಿಮ್ಮನ್ನು ಮುಂದಕ್ಕೆ ತೆಗೆದುಕೊಂಡು ಹೋಗುತ್ತದೆ. ವಿರೋಧಿಗಳಿಂದ ದೂರವಿರಿ. ಶುಭದಿನ 26. ಶ್ರೀ ದುರ್ಗಾ ಆರಾಧನೆ ಮಾಡಿರಿ.




ವಾರದ ಶುರುವಿನಿಂದಲೇ ವೃತ್ತಿಪರ ಜೀವನದಲ್ಲಿ ಉತ್ತಮ ಅವಕಾಶಗಳು ದೊರೆಯಲಿವೆ. ಅದರ ಫಲಿತವಾಗಿ ಸರಿಯಾದ ಸಮಯಕ್ಕೆ ಕೆಲಸ ಕಾರ್ಯಗಳು ಪೂರ್ಣಗೊಳ್ಳಲಿವೆ. ಮಕ್ಕಳಿಗೆ ಸಹಾಯ ಮಾಡಲಿದ್ದೀರಿ. ಕುಟುಂಬದಲ್ಲಿ ಹಲವು ಬದಲಾವಣೆ ತರುವ ಮೂಲಕ ಸಂತೋಷ ಉಂಟು ಮಾಡಲಿದ್ದೀರಿ. ಉದ್ಯೋಗ ಸ್ಥಳದಲ್ಲಿ ಹೆಚ್ಚು ತಾಳ್ಮೆಯಿಂದ ಕೆಲಸ ಮಾಡಿ. ಶುಭದಿನ 27. ಹನುಮಾನ್ ಚಾಲೀಸ್ ಓದಿರಿ.




ದಾನ ಧರ್ಮ ಕಾರ್ಯಗಳಲ್ಲಿ ಆಸಕ್ತಿ ಮೂಡುತ್ತದೆ. ಅದಕ್ಕೆ ನಿಮ್ಮ ಕುಟುಂಬದ ಬೆಂಬಲವೂ ದೊರೆಯುತ್ತದೆ. ನಿಮ್ಮ ತಾಯಿಯವರ ಅನಾರೋಗ್ಯ ಆತಂಕಕ್ಕೆ ಗುರಿ ಮಾಡಬಹುದು. ಆದಾಯ ಮೂಲಗಳಿಂದ ಉತ್ತಮ ವರಮಾನ ಇರುತ್ತದೆ. ನಿಮ್ಮ ಆತ್ಮವಿಶ್ವಾಸ ಹೆಚ್ಚಾಗುತ್ತದೆ. ಜೀವನಶೈಲಿ ಮತ್ತಷ್ಟು ಉತ್ತಮಗೊಳ್ಳುತ್ತದೆ. ಶುಭದಿನ 28. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ನಿಮ್ಮ ಸಾಮರ್ಥ್ಯವನ್ನು ಸರಿಯಾದ ದಿಕ್ಕಿನಲ್ಲಿ ಬಳಕೆ ಮಾಡಿಕೊಳ್ಳುತ್ತೀರಿ. ಇದರಿಂದ ಮುಂಬರುವ ದಿನಗಳಲ್ಲಿ ಅನುಕೂಲ ಆಗುತ್ತದೆ. ಆರೋಗ್ಯದಲ್ಲಿ ಏರುಪೇರಾಗುವ ಸಾಧ್ಯತೆಗಳಿವೆ. ಸಹೋದರರ ಜೊತೆಗೆ ಅತಿ ಮುಖ್ಯವಾದ ವಿಚಾರಗಳನ್ನು ಚರ್ಚೆ ಮಾಡುತ್ತೀರಿ. ಇದರಿಂದ ಅವರ ಪ್ರಗತಿಗೆ ಅನುಕೂಲ ಆಗುತ್ತದೆ. ವಾರದ ಕೊನೆ ಭಾಗದಲ್ಲಿ ಕೆಲಸದಲ್ಲಿ ಪ್ರಗತಿ ಇದೆ. ಶುಭದಿನ 29. ವಿಷ್ಣು ಸಹಸ್ರನಾಮ ಓದಿರಿ.




ವಾರದ ಮೊದಲ ಭಾಗದಲ್ಲಿ ದೂರದ ಪ್ರದೇಶಗಳಿಗೆ ತೆರಳುವ ಸಂಭವ. ಭೂಮಿಗೆ ಸಂಬಂಧಿಸಿದ ವ್ಯಾಜ್ಯಗಳನ್ನು ನಿವಾರಿಸಿಕೊಳ್ಳುವ ನಿಟ್ಟಿನಲ್ಲಿ ಹೆಚ್ಚು ಶ್ರಮ ಪಡಬೇಕಾಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಆಲೋಚನೆ ಮಾಡುತ್ತೀರಿ. ಈ ಮಧ್ಯೆ ನಿಮ್ಮ ವೈಯಕ್ತಿಕ ಸಂಬಂಧದಲ್ಲಿ ಕೆಲ ಗೊಂದಲ ಏರ್ಪಡುತ್ತದೆ. ಶುಭದಿನ 30. ಕಾಲಭೈರವನ ಸೇವೆ ಮಾಡಿರಿ.




ನಿಮ್ಮ ಸಂಬಂಧಿಕರ ಭೇಟಿ ಮಾಡುವ ಸಾಧ್ಯತೆ ಇದೆ. ಕೆಲ ಮುಖ್ಯವಾದ ವಿಚಾರಗಳನ್ನು ಅವರ ಜೊತೆ ಚರ್ಚೆ ಮಾಡಲಿದ್ದೀರಿ. ಹೆಚ್ಚಿನ ಖರ್ಚು ಆಗಲಿದೆ. ಉದ್ಯೋಗದಲ್ಲಿ ಒತ್ತಡ ಹೆಚ್ಚಾಗುವ ಸಾಧ್ಯತೆಯಿದೆ. ತಲೆ ನೋವು, ಕಿವಿ ನೋವು ಅಥವಾ ಹಲ್ಲು ನೋವಿನಂಥ ಸಮಸ್ಯೆಗಳು ಕಾಡಬಹುದು. ಭೂಮಿ ಖರೀದಿಗೆ ಮನಸ್ಸು ಮಾಡುತ್ತೀರಿ. ಶುಭದಿನ 25. ದೇವ್ಯಪರಾಧ ಕ್ಷಮಾಪನಾ ಸ್ತೋತ್ರ ಪಠಣ ಮಾಡಿರಿ.




ವೃತ್ತಿಪರ ಜೀವನದಲ್ಲಿ ಉತ್ತಮವಾದ ಅವಕಾಶಗಳು ದೊರೆಯಲಿವೆ. ಕೌಟುಂಬಿಕ ವಿಷಯಗಳಲ್ಲಿ ಪ್ರಗತಿ ಕಾಣಲಿದೆ. ವ್ಯಾಪಾರದಲ್ಲಿ ಪ್ರಗತಿ ಕಾಣಿಸುತ್ತದೆ. ನಿಮ್ಮ ಆರೋಗ್ಯ ಕೂಡ ಉತ್ತಮವಾಗಿರುತ್ತದೆ. ತಂತ್ರಜ್ಞಾನ, ಮ್ಯಾನೇಜ್‌ಮೆಂಟ್ ಕ್ಷೇತ್ರಕ್ಕೆ ಸಂಬಂಧಿಸಿದವರಿಗೆ ಉತ್ತಮವಾದ ಪ್ರಗತಿ ಕಾಣಲಿದೆ. ನಿಮ್ಮ ಕೆಲಸಗಳಿಗೆ ಹೆಚ್ಚಿನ ಶ್ರಮ ಹಾಕಬೇಕಾಗುತ್ತದೆ. ಶುಭದಿನ 31. ದಕ್ಷಿಣಾಮೂರ್ತಿ ಸ್ತೋತ್ರ ಪಠಣ ಮಾಡಿರಿ.




ಉದ್ಯೋಗಸ್ಥರು ನಿಮಗೆ ವಹಿಸಿದ ಕೆಲಸಗಳನ್ನು ಪೂರೈಸಲು ಯಶಸ್ವಿ ಆಗುತ್ತೀರಿ. ನಿಮ್ಮ ಸಿಬ್ಬಂದಿಯ ಆತ್ಮಸ್ಥೈರ್ಯ ಹೆಚ್ಚಿಸುವಲ್ಲಿ ಸಫಲರಾಗುತ್ತೀರಿ. ಪ್ರೋತ್ಸಾಹ ನೀಡುತ್ತೀರಿ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ನೀಡಿದ ಸಂದರ್ಶನಗಳು ಯಶಸ್ಸು ಕಾಣುವ ಸಾಧ್ಯತೆಗಳಿವೆ. ವೈಯಕ್ತಿಕ ಸಂಬಂಧದಲ್ಲಿ ಸಂಗಾತಿಯ ಭಾವನೆಗಳಿಗೂ ಗೌರವ ನೀಡಿ. ಶುಭದಿನ 28. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಹಣಕಾಸು ಹೂಡಿಕೆಯಲ್ಲಿ ಪ್ರಗತಿ ಕಾಣಲಿದ್ದೀರಿ. ಬಾಹ್ಯ ಚಟುವಟಿಕೆಗಳು ಈ ಹಿಂದಿನಂತೆಯೇ ನಡೆಯುತ್ತವೆ. ತಾಳ್ಮೆ ಹಾಗೂ ವಿವೇಚನೆ ಬಹಳ ಮುಖ್ಯವಾಗುತ್ತದೆ. ವೈಯಕ್ತಿಕ ಸಂಬಂಧದಲ್ಲಿ ಸಂಗಾತಿಯಿಂದ ಕೆಲ ಗೊಂದಲ, ಆತಂಕ ಸೃಷ್ಟಿ ಆಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಗ್ರಹ ಸ್ಥಿತಿಗಳು ನಿಮಗೆ ಅನುಕೂಲಕರವಾಗಿ ಪರಿಣಮಿಸುತ್ತವೆ. ನಿಮ್ಮ ಆರೋಗ್ಯ ಚೆನ್ನಾಗಿರುತ್ತದೆ. ಶುಭದಿನ 31. ಈಶ್ವರನಿಗೆ ರುದ್ರಾಭಿಶೇಕ ಮಾಡಿಸಿ.




ವಾರದ ಶುರುವಿನಿಂದಲೇ ನಿಮ್ಮ ಅದೃಷ್ಟ ಚೆನ್ನಾಗಿದೆ. ಕೆಲಸಗಳನ್ನು ಪೂರ್ಣಗೊಳಿಸಲು ಹಿಂದೆಂದಿಗಿಂತಲೂ ಹೆಚ್ಚು ಚಟುವಟಿಕೆಯಿಂದ ಕಾಣಿಸಿಕೊಳ್ಳುತ್ತೀರಿ. ಕಟ್ಟಡ–ವಾಹನಗಳ ನಿರ್ವಹಣೆಯು ನಿರಂತರ ಚಿಂತೆಗೆ ಕಾರಣವಾಗುತ್ತದೆ. ಉದ್ಯೋಗ ನೇಮಕಾತಿಯ ಜವಾಬ್ದಾರಿಯ ಹೊತ್ತಿರುವವರು ಸಾಮರ್ಥ್ಯದ ಸದುಪಯೋಗ ಮಾಡಿಕೊಳ್ಳಬೇಕು. ಶುಭದಿನ 29. ಮಾರುತಿ ಗುಡಿಗೆ ಮುಖ ನೋಡಿದ ಎಣ್ಣೆ ನೀಡಿರಿ.




ವ್ಯಾಪಾರ–ವ್ಯವಹಾರ ಮಾಡುತ್ತಿರುವವರು ಅದನ್ನು ಮುಂದಿನ ಹಂತಕ್ಕೆ ತೆಗೆದುಕೊಂಡು ಹೋಗಲು ಯತ್ನಿಸುತ್ತೀರಿ. ನಿಮ್ಮ ಶ್ರಮಕ್ಕೆ ಯಶಸ್ಸು ದೊರೆಯುತ್ತದೆ. ನಿಮ್ಮ ಆರೋಗ್ಯ ಚೆನ್ನಾಗಿರುತ್ತದೆ. ವೈವಾಹಿಕ ಜೀವನವು ಸಂತೋಷವಾಗಿ ಇರುತ್ತದೆ. ಉದ್ಯಮಿಗಳಾಗಿದ್ದಲ್ಲಿ ದೀರ್ಘಾವಧಿ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆಗಳಿವೆ. ಆರೋಗ್ಯದ ಬಗ್ಗೆ ಜಾಗ್ರತೆ ವಹಿಸಿ. ಶುಭದಿನ 26. ಸುಬ್ರಹ್ಮಣ್ಯ ಜಪ ಮಾಡಿರಿ.




ನಿಮ್ಮ ಕೆಲಸ–ಕಾರ್ಯಗಳನ್ನು ಓರಣವಾಗಿ ಮಾಡಲು ಇನ್ನೂ ಹೆಚ್ಚಿನ ಶ್ರಮ ಹಾಕುತ್ತೀರಿ. ನಿಮ್ಮ ಮೇಲಧಿಕಾರಿಗಳು ವೇಗವನ್ನು ಮತ್ತಷ್ಟು ಹೆಚ್ಚಿಸಿಕೊಳ್ಳುವಂತೆ ಸೂಚನೆ ನೀಡುತ್ತಾರೆ. ಕೆಲವು ವ್ಯವಹಾರಗಳನ್ನು ಮಾಡುವಾಗ ಬಹಳ ಎಚ್ಚರಿಕೆಯಿಂದ ಇರಬೇಕಾಗುತ್ತದೆ. ಭೂಮಿ ಖರೀದಿ ವಿಚಾರದಲ್ಲಿ ಬಿಕ್ಕಟ್ಟುಗಳು ಇದ್ದಲ್ಲಿ ಅವು ನಿವಾರಣೆ ಆಗುತ್ತವೆ. ಶುಭದಿನ 31. ನವದುರ್ಗಾ ಆರಾಧನೆ ಮಾಡಿರಿ.